# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 34-ಗಂಗೇನಹಳ್ಳಿ, ಬೆಂಗಳೂರು.

ಸಂಖ್ಯೆ: ಸ.ಅ/ವಾ-34/ಪಿ.ಆರ್/06/2020-21 ದಿನಾಂಕ: 24-12-2020.

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 19-12-2020 ರಂದು ಸಂಜೆ: 3.00 ಗಂಟೆಗೆ ವಾರ್ಡ್ ನಂ: 34-ರ ಗಂಗೇನಹಳ್ಳಿ ಬಿಬಿಎಂಪಿ ಶಾಲೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ ತಿಮ್ಮರಸ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ರಾಮ್‌ರಾವ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ.34 |
| 3. | ರಾಜು | ಬಿಬಿಎಂಪಿ ತಾಂತ್ರಿಕ ಸಹಾಯಕರು |
| 4. | ಮಧು | ಕಿರಿಯ ಆರೋಗ್ಯ ಪರಿವೀಕ್ಷಕರು |
| 5. | ವೆಂಕಟೇಶ್ ಎಂ. | ಮೇಲ್ವಿಚರಕರು ಬಿಬಿಎಂಪಿ |
| 6. | ಸುರ್ವಣ ದೇವಿ | ಬಿಡಬ್ಲೂಎಸ್‌ಎಸ್‌ಬಿ |
| 7. | ಮಂಜುನಾಥ್ | ಸಾರ್ವಜನಿಕರು |
| 8. | ಬಸವರಾಜ್ | ಸಾರ್ವಜನಿಕರು |
| 9. | ನಂದಕುಮಾರ್ | ಸಾರ್ವಜನಿಕರು |
| 10. | ಚಂದ್ರು | ಸಾರ್ವಜನಿಕರು |
| 11. | ಜಗದೀಶ್ | ಸಾರ್ವಜನಿಕರು |
| 12. | ರಾಜು | ಸಾರ್ವಜನಿಕರು |
| 13. | ಪ್ರಶಾಂತ್ ಕುಮಾರ್ ಎಂ.ವಿ | ಸಾರ್ವಜನಿಕರು |
| 14. | ವೇದಕುಮಾರ್ | ಸಾರ್ವಜನಿಕರು |
| 15. | ಎಂ. ಸ್ರಾವನ್ | ಸಾರ್ವಜನಿಕರು |
| 16. | ಅನ್ಸಾರ್ ಖಾನ್ | ಸಾರ್ವಜನಿಕರು |
| 17. | ಎಸ್ ವಸಂತ | ಸಾರ್ವಜನಿಕರು |
| 18. | ಗುರು ಕಿರಣ್ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ.ತಿಮ್ಮರಸ ಮತ್ತು ಕಾರ್ಯದರ್ಶಿಗಳಾದ ಶ್ರೀ ರಾಮ್‌ರಾವ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ:34 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ವಾರ್ಡ್ ವ್ಯಾಪ್ತಿಯ ಪಾರ್ಕ್‌ಗಳನ್ನು ವಾರಕ್ಕೆ 2 ಬಾರಿ ಸ್ವಚ್ಛತಾ ಕಾರ್ಯವನ್ನು ನಿರ್ವಹಿಸಲು ಅಗತ್ಯ ಕ್ರಮ ವಹಿಸುವಂತೆ ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.
- ವಾರ್ಡ್ ಸಂಖ್ಯೆ 34 ರ ವ್ಯಾಪ್ತಿಯ ಬೀದಿ ದೀಪಗಳ ಬಗ್ಗೆ ತಿಳಿಸಲಾಗಿರುತ್ತದೆ. ಸದರಿ ದೂರಿನ ಬಗ್ಗೆ ವಿದ್ಯುತ್ ವಿಭಾಗದ ಸಹಾಯಕ ಅಭಿಯಂತರರು ರವರಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದ ಸ್ವಚ್ಛತೆ ಬಗ್ಗೆ ಚರ್ಚಿಸಿ ಸ್ವಚ್ಛವಾಗಿಡಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು. ಈಗಾಗಲೇ ಕೆಲವು ಸ್ಥಳಗಳಲ್ಲಿ ತೀವ್ರವಾದ ಶುಚಿಗೊಳಸುವಿಕೆ ಮಾಡಿಸಲಾಗಿರುತ್ತದೆ.
- ವಾರ್ಡ್ ವ್ಯಾಪ್ತಿಯಲ್ಲಿನ ಪ್ರದೇಶಗಳಲ್ಲಿನ ಮರಗಳಲ್ಲಿ ಕೊಂಬೆಗಳು ಕೆಲವು ಹೊಣಗಿರುವುದನ್ನು ಕಡಿತಗೊಳಸಲಾಗಿರುತ್ತದೆ. ಉಳಿದವುಗಳನ್ನು ಮಾಡಲಾಗುವುದೆಂದು ತಿಳಸಿದರು.
- ಬೆಸ್ಕಾಂ ರವರು ವಿದ್ಯುತ್ ಕಂಬ್ಳಿಗೆ ತಗಲುವ ಮರದ ಕೊಂಬೆಗಳನ್ನು ಕಡಿತಗೊಳಸಿ ತಾವೆ ಸ್ವಚ್ಛಗೊಳಸುವಂತೆ ಸೂಚಿಸಲಾಯಿತು.
- ಬಿಡಬ್ಲ್ಯೂಎಸ್ಎಸ್ಬಿ ರವರಿಗೆ ಕೊಳವೆಗಳ ತಡೆ ಮತ್ತು ಒಲಚರಂಡಿ ಮಣ್ಣನ್ನು ತೆರವುಗೊಳಸುವಂತೆ ಸೂಚಿಸಲಾಗಿದೆ.
- ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿ ಪಾರ್ಕ್ ನಿರ್ವಹಣೆ ಮಾಡದಿರುವ ಬಗ್ಗೆ ಚರ್ಚಿಸಲಾಗಿ ನಿರ್ವಹಣೆಯ ಬಗ್ಗೆ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಗೆ ಸೂಚಿಸಿಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ತ್ಯಾಜ್ಯ ವಿಗಂಡನೆ ಮಾಡದೆ ಮಿಶ್ರ ತ್ಯಾಜ್ಯ ಸಾಗಿಸುತ್ತಿರುವ ಬಗ್ಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳನ್ನು ಅಳವಡಿಸುವ ಬಗ್ಗೆ ಅಗತ್ಯಾ ಕ್ರಮ ವಹಿಸಲು ಬೆಸ್ಕಾಂ ಅಧಿಕಾರಿಗಳಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪತಿಯಲ್ಲಿನ ಪಾಟ್‌ಹೋಲ್‌ಗಳನ್ನು ಈಗಾಗಲೇ ಸರಿಪಡಿಸಲಾಗಿರುತ್ತದೆಂದು ತಿಳಸಲಾಗಿದೆ.
- ಎಂ.ಎಲ್.ಎ ಲೇಔಟ್ ಪಾರ್ಕ್ ಬಳ ನಿಲುಗಡೆ ಮಾಡಿರುವ ವಾಹನಗಳನ್ನು ತೆರವುಗೊಳಸುವ ಬಗ್ಗೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯ ಕೆಲವು ಸ್ಥಳಗಳಲ್ಲಿ ಸಿಸಿ ರಸ್ತೆ ನಿರ್ಮಿಸುವ ಬಗ್ಗೆ ಕ್ರಮ ವಹಿಸುವಂತೆ ಸೂಚಿಸಲಾಯಿತು.
- ಸಾರ್ವಜನಿಕರುಗಳಲ್ಲಿ ಕೋವಿಡ್-19 ರ ಅರಿವು ಮೂಡಿಸಿ ಮಾಸ್ಕ್ ದರಿಸಲು ಹಾಗೂ ಸ್ಪಂದಿಸದ ಸಾರ್ವಜನಿಕರುಗಳಗೆ ದಂಡ ವಿದಿಸಲು ವಾರ್ಡ್ ಮಾರ್ಷಲ್ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯ ಬಿಬಿಎಂಪಿ ಶಾಲೆಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತೆ ಮಾಡಿ ತ್ಯಾಜ್ಯವನ್ನು ಸಾಗಿಸುವಂತೆ ವಾರ್ಡ್ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯ ಎಲ್ಲಾ ಸ್ಥಳದಲ್ಲು ಔಷಧಿ ಸಿಂಪಡಿಸುವಂತೆ ಆರೋಗ್ಯ ವೈದ್ಯಾದಿಕಾರಿಗಳಗೆ ಸೂಚಿಸಲಾಯಿತು.
- ವಾರ್ಡ್ ಸಮಿತಿ ಸಭೆಗೆ ಪೋಲಿಸ್ ಸಿಂಬದಿಗಳು ಹಾಜರಾಗಿರುವುದಿಲ್ಲ ಅವರುಗಳಗೆ ನೋಟಿಸ್ ನೀಡಿ ಮುಂದಿನ ಸಭೆಗೆ ಹಾಜರಾಗಲು ಸೂಚಿಸುವಂತೆ ತಿಳಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಗೆ ಸಂಬಂಧಪಟ್ಟಂತೆ ಕೂಲಂಕುಶವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಸಲಾಯಿತು.

PKadam 21/12

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 34, ಗಂಗೇನಹಳ್ಳಿ

ಅಧ್ಯಕ್ಷರು
ಹಾಗೂ ನೋಡೆಲ್ ಅಧಿಕಾರಿಗಳು
ವಾರ್ಡ್ ನಂ:34, ಗಂಗೇನಹಳ್ಳಿ

<u>ಪ್ರತಿಯನ್ನು:-</u>

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.